# 03.05.2025 ರಾಷ್ಟ್ರೀಯ ವಾರ್ತೆಗಳು 19.35

## ಮುಖ್ಯಾಂಶಗಳು

1. ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರಕ್ಕೆ ಭಾರತ–ಅಂಗೋಲಾ ನಡುವೆ ಒಪ್ಪಂದ

2. ನ್ಯಾಯದಾನದಲ್ಲಿ ಮಧ್ಯಸ್ಥಿಕೆ ಅತ್ಯಗತ್ಯ ಭಾಗ– ರಾಷ್ಟ್ರಪತಿ ದ್ರೌಪದಿ ಮುರ್ಮು

3. ವೇವ್ಸ್ 2025: ವೇವ್ಸ್ ಬಜಾರ್‌ನಲ್ಲಿ ಒಂದು ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ವ್ಯವಹಾರ

4. ಐಪಿಎಲ್ ಟಿ–20 ಕ್ರಿಕೆಟ್: ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್ ಫೀಲ್ಡಿಂಗ್ ಆಯ್ಕೆ

Edited by Santhosh, Editor
Typed by Pooja

**03.05.2025 ರಾಷ್ಟ್ರೀಯ ವಾರ್ತೆಗಳು 19.35 ಪ್ರಧಾನಿ – ಆಂಗೋಲಾ – 1**

ನವದೆಹಲಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಅಂಗೋಲಾ ಅಧ್ಯಕ್ಷ ಜೋವೊ ಮ್ಯಾನುಯೆಲ್ ಗೊನ್ಸಾ ಲ್ವೆಸ್ ಲೂರೆಂಕೊ ನಿಯೋಗ ಮಟ್ಟದ ಮಾತುಕತೆ ನಡೆಸಿದರು.

ಮಾತುಕತೆಯ ನಂತರ ಎರಡೂ ದೇಶಗಳ ನಡುವೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಹೆಚ್ಚಿಸಲು ಹಲವಾರು ಒಪ್ಪಂದಗಳಿಗೆ ಸಹಿ ಹಾಕಿದರು.

ಇದಕ್ಕೂ ಮುನ್ನ ಅಂಗೋಲಾದ ಅಧ್ಯಕ್ಷ ಜೋವೊ ಮ್ಯಾನುಯೆಲ್ ಗೊನ್ಸಾಲ್ವೆಸ್ ಲೂರೆಂಕೊ ಅವರಿಗೆ ಇಂದು ಬೆಳಗ್ಗೆ ರಾಷ್ಟ್ರಪತಿ ಭವನದ ಮುಂಭಾಗದಲ್ಲಿ ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಈ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅಂಗೋಲಾದ ಅಧ್ಯಕ್ಷರನ್ನು ಸ್ವಾಗತಿಸಿದರು. ನಂತರ  ಅಂಗೋಲಾದ ಅಧ್ಯಕ್ಷರು ರಾಜ್‌ಘಾಟ್‌ನಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರಿಗೆ ಗೌರವ ನಮನ ಸಲ್ಲಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅಂಗೋಲಾ ಅಧ್ಯಕ್ಷ ಲೊರೆಂಕೊ, 38 ವರ್ಷಗಳಲ್ಲಿ ಮೊದಲನೇ ಬಾರಿ ಕೈಗೊಂಡಿರುವ ಈ ಭಾರತ ಭೇಟಿ, ಉಭಯ ರಾಷ್ಟ್ರಗಳಿಗೆ ವಿಶೇಷವಾಗಿ ಅಂಗೋಲಾಗೆ ಮಹತ್ವದ ಕ್ಷಣವಾಗಿದೆ. ಉಭಯ ರಾಷ್ಟ್ರಗಳ ನಡುವಿನ ಸ್ನೇಹ ಮತ್ತು ಸಹಕಾರ ಸಂಬಂಧ ಬಲಪಡಿಸುವ ನಿಟ್ಟಿನಲ್ಲಿ ಈ ಭೇಟಿ ಮಹತ್ವ ಪಡೆದಿದೆ ಎಂದಿದ್ದಾರೆ.

Source: NEWS ON AIR
Translated by : Santhosh
Edited by : Santhosh
Typed by : Pooja

**03.05.2025 ರಾಷ್ಟ್ರೀಯ ವಾರ್ತೆಗಳು 19.35 ಪ್ರಧಾನಿ–ಅಂಗೋಲಾ–2**

ಈ ವರ್ಷ ಭಾರತ ಮತ್ತು ಅಂಗೋಲಾ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ 40 ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿರುವ ಸಮಯದಲ್ಲಿ ಅವರ ಈ ಭೇಟಿ ಮಹತ್ವ ಪಡೆದಿದೆ.

ಅಂಗೋಲಾ ಅಧ್ಯಕ್ಷರು ಭಾರತಕ್ಕೆ ಮೂರು ದಿನಗಳ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದರು. ಅವರೊಂದಿಗೆ ಹಲವಾರು ಸಚಿವರು, ಹಿರಿಯ ಅಧಿಕಾರಿಗಳು, ವ್ಯಾಪಾರ ಸಂಸ್ಥೆಗಳು ಮತ್ತು ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗವೂ ಆಗಮಿಸಿದೆ.

ನಾಳೆ, ಅಧ್ಯಕ್ಷ ಲಾರೆಂಕೊ ನವದೆಹಲಿಯಲ್ಲಿ ನಡೆಯಲಿರುವ ವ್ಯಾಪಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ, ಇದು ಎರಡೂ ದೇಶಗಳ ನಡುವಿನ ಹೂಡಿಕೆ ಮತ್ತು ವಾಣಿಜ್ಯ ಸಂಪರ್ಕಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.

2023–2024ರ ಅವಧಿಯಲ್ಲಿ ಭಾರತ–ಅಂಗೋಲಾ ನಡುವಿನ ದ್ವಿಪಕ್ಷೀಯ ವ್ಯಾಪಾರ 4.192 ಶತಕೋಟಿ ಡಾಲರ್ ತಲುಪಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಅಭಿವೃದ್ಧಿ ಪಾಲುದಾರಿಕೆ, ಸಾಮರ್ಥ್ಯ–ನಿರ್ಮಾಣ ಸಹಕಾರ ಮತ್ತು ರಕ್ಷಣಾ ಸಂಬಂಧಗಳು ಸಹ ವಿಸ್ತರಿಸುತ್ತಿವೆ. ವಿಶ್ವಸಂಸ್ಥೆ ಸೇರಿದಂತೆ ವಿವಿಧ ಬಹುಪಕ್ಷೀಯ ವೇದಿಕೆಗಳಲ್ಲಿ ಎರಡೂ ದೇಶಗಳು ಪರಸ್ಪರ ಉಮೇದುವಾರಿಕೆಯನ್ನು ಬೆಂಬಲಿಸುತ್ತವೆ.

Source: NEWS ON AIR
Translated by : Santhosh
Edited by : Santhosh
Typed by : Pooja

## 03.05.2025 ರಾಷ್ಟ್ರೀಯ ವಾರ್ತೆಗಳು 19.35 ರಾಷ್ಟ್ರಪತಿ

ನ್ಯಾಯದಾನದಲ್ಲಿ ಇಂದು ಮಧ್ಯಸ್ಥಿತಿಕೆಯು ಅತ್ಯಗತ್ಯ ಭಾಗವಾಗಿದೆ. ನಿರ್ದಿಷ್ಟ ಪ್ರಕರಣಗಳಲ್ಲಿ ಮಾತ್ರವಲ್ಲದೇ ಇತರ ಪ್ರಕರಣಗಳಲ್ಲಿಯೂ ಹೆಚ್ಚಿನ ಸಂಖ್ಯೆಯ ಮೊಕದ್ದಮೆಗಳ ಹೊರೆಯನ್ನು ಕಡಿಮೆ ಮಾಡುವ ಮೂಲಕ ಮಧ್ಯಸ್ಥಿತಿಕೆಯು ನ್ಯಾಯಾದಾನವನ್ನು ವೇಗಗೊಳಿಸುತ್ತದೆ ಎಂದು ರಾಷ್ಟ್ರಪತಿ  ದ್ರೌಪದಿ ಮುರ್ಮು ಅಭಿಪ್ರಾಯಪಟ್ಟಿದ್ದಾರೆ.

ನವದೆಹಲಿಯ ಭಾರತ್ ಮಂಟಪಂನಲ್ಲಿಂದು ಭಾರತೀಯ ಮಧ್ಯಸ್ಥಿಕೆ ಸಂಘ ಮತ್ತು ಮೊದಲ ರಾಷ್ಟ್ರೀಯ ಮಧ್ಯಸ್ಥಿಕೆ ಸಮ್ಮೇಳನ–2025 ಉದ್ಘಾಟಿಸಿ ಮಾತನಾಡಿದ ರಾಷ್ಟ್ರಪತಿಗಳು, 2047ರ ವೇಳೆಗೆ ವಿಕಸಿತ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸಲು ಮಧ್ಯಸ್ಥಿಕೆಯು ಪ್ರಮುಖ ಸಾಧನವಾಗಿದೆ ಎಂದು ಹೇಳಿದರು.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ನ್ಯಾಯಮೂರ್ತಿ ಸಂಜೀವ್ ಖನ್ನಾ ಮಾತನಾಡಿ, ಕಳೆದ ಎರಡು ದಶಕಗಳಲ್ಲಿ, ವಿವಾದಗಳನ್ನು ಪರಿಹರಿಸುವಲ್ಲಿ ಮಧ್ಯಸ್ಥಿಕೆಯು ನಿರ್ಣಾಯಕ ಪಾತ್ರ ವಹಿಸಿದೆ. ಮ2016 ರಿಂದ 2025 ರ ಆರಂಭದವರೆಗೆ, ಏಳು ಲಕ್ಷ 57 ಸಾವಿರಕ್ಕೂ ಹೆಚ್ಚು ಪ್ರಕರಣಗಳನ್ನು ಮಧ್ಯಸ್ಥಿಕೆಯ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ಮಾಹಿತಿ ನೀಡಿದರು.

Source:_NEWS ON AIR
Translated by  : Santhosh
Edited by  : Santhosh
Typed by :      Pooja

## 03.05.2025 ರಾಷ್ಟ್ರೀಯ ವಾರ್ತೆಗಳು 19.35 ವೇವ್ಸ್ ಬಜಾರ್

ಮುಂಬೈನಲ್ಲಿ ನಡೆದ ವೇವ್ಸ್ ಬಜಾರ್ 2025 ಒಂದು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ವ್ಯವಹಾರ ನಡೆಸಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಕಾರ್ಯದರ್ಶಿ ಸಂಜಯ್ ಜಾಜು ತಿಳಿಸಿದ್ದಾರೆ.

ಮುಂಬೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶ ವಿದೇಶಗಳ ಉನ್ನತ ದರ್ಜೆಯ ಕಂಪನಿಗಳು ವೇವ್ಸ್ ಬಜಾರ್‌ನಲ್ಲಿ ಭಾಗವಹಿಸಿವೆ ಎಂದು ಮಾಹಿತಿ ನೀಡಿದ್ದಾರೆ.

ವೇವ್ಸ್  ಶೃಂಗಸಭೆಯ ಪ್ರಮುಜಾಗತಿಕ ಮಾರುಕಟ್ಟೆ ಉಪಕ್ರಮವಾದ ವೇವ್ಸ್ ಬಜಾರ್, ಮಾಧ್ಯಮ ಮತ್ತು ಮನರಂಜನಾ ಉದ್ಯಮದಲ್ಲಿ ಅಂತಾರಾಷ್ಟ್ರೀಯ ಸಹಯೋಗಕ್ಕೆ ಪ್ರಬಲ ವೇಗವರ್ಧಕವಾಗಿ ಹೊರಹೊಮ್ಮಿದೆ. ಇದು ಉದ್ಯಮ ವೃತ್ತಿಪರರು ಸಂಪರ್ಕ ಸಾಧಿಸಲು, ಸಹಯೋಗಿಸಲು ಹಾಗೂ ಹೊಸ ವ್ಯಾಪಾರ ಅವಕಾಶಗಳನ್ನು ನಡೆಸಲು ಮೀಸಲಾದ ವೇದಿಕೆಯಾಗಿದೆ ಎಂದು  ಸಂಜಯ್ ಜಾಜು ಹೇಳಿದ್ದಾರೆ.

Source:_NEWS ON AIR
Translated by : Santhosh
Edited by : Santhosh
Typed by : Pooja

**03.05.2025 ರಾಷ್ಟ್ರೀಯ ವಾರ್ತೆಗಳು 19.35 ವೇವ್ಸ್ – ಅಶ್ವಿನಿ ವೈಷ್ಣವ್**

ಮಾಧ್ಯಮ ಮತ್ತು ಮನೋರಂಜನಾ ಕ್ಷೇತ್ರದಲ್ಲಿ ಭಾರತ ಜಾಗತಿಕ ನಾಯಕತ್ವವನ್ನು ವಹಿಸಿಕೊಳ್ಳಬಹುದು. ಈ ನಿಟ್ಟಿನಲ್ಲಿ ಹಲವಾರು ಜಾಗತಿಕ ಸಂಸ್ಥೆಗಳು ಭಾರತದೊಂದಿಗೆ ಕೆಲಸ ಮಾಡಲು ಇಚ್ಛೆ ವ್ಯಕ್ತಪಡಿಸಿವೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಮುಂಬೈನ ಜಿಯೋ ವರ್ಲ್ಡ್ ಕನ್ವೇಷನ್ ಸೆಂಟರ್‌ನಲ್ಲಿ ನಡೆಯುತ್ತಿರುವ ವೇವ್ಸ್ ಶೃಂಗಸಭೆಯ ಸಂದರ್ಭದಲ್ಲಿ ಗೂಗಲ್, ಮೆಟಾ ಮತ್ತು ಮೈಕ್ರೋಸಾಫ್ಟ್ ಸೇರಿದಂತೆ 7 ಜಾಗತಿಕ ಸಂಸ್ಥೆಗಳು ಇಂದು ಇಂಡಿಯನ್ ಇನ್ಸ್‌ಟ್ಯೂಟ್ ಆಫ್ ಕ್ರಿಯೇಟಿವ್ ಟೆಕ್ನಾಲಜಿ ಜೊತೆ ಒಪ್ಪಂದಕ್ಕೆ ಸಹಿ ಹಾಕಿವೆ.

400 ಕೋಟಿ ರೂಪಾಯಿಗಳ ನಿಧಿಯೊಂದಿಗೆ ಐಐಸಿಟಿ ಅನ್ನು ಮುಂಬೈನಲ್ಲಿ ಸ್ಥಾಪಿಸಲಾಗುವುದು.

ಈ ಸಂದರ್ಭದಲ್ಲಿ ಮಾತಾನಾಡಿದ ಸಚಿವ ಅಶ್ವಿನಿ ವೈಷ್ಣವ್, ಅನಿಮೇಷನ್, ವಿಶುವಲ್ ಎಫೆಕ್ಟ್ಸ್ , ಗೇಮಿಂಗ್ ಮತ್ತು ಕಾಮಿಕ್ಸ್‌ಗಳಿಗೆ ರಾಷ್ಟ್ರೀಯ ಕೇಂದ್ರವಾಗಲು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಗೇಮಿಂಗ್ ಟೆಕ್ನಾಲಜಿ ಸಜ್ಜಾಗಿದೆ. ಐಐಟಿ ಮತ್ತು ಐಐಎಂ ನಂತೆಯೇ ಮುಂದಿನ ದಿನಗಳಲ್ಲಿ ಐಐಸಿಟಿ ಕೂಡ ಮಾದರಿಯಾಗಲಿದೆ ಎಂದು ಹೇಳಿದರು.

ಈ ವೇಳೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಉಪಸ್ಥಿತರಿದ್ದರು.

Source:__ NEWS ON AIR
Translated by : Santhosh
Edited by : Santhosh
Typed by : Pooja

**03.05.2025 ರಾಷ್ಟ್ರೀಯ ವಾರ್ತೆಗಳು 19.35 ಅಮಿತ್ ಶಾ**

ದೇಶದ ವಿವಿಧ ಭಾಗಗಳಲ್ಲಿ ಮಾದಕ ದ್ರವ್ಯ ನಿಯಂತ್ರಣ ಘಟಕ ಕಾರ್ಯಾಚರಣೆ ನಡೆಸಿ, 547 ಕೋಟಿ ರೂಪಾಯಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡು, 15 ಮಂದಿಯನ್ನು ಬಂಧಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಎನ್‌ಸಿಬಿ ನಡೆಸಿದ ಕಾರ್ಯಾಚರಣೆಯನ್ನು ಅಭಿನಂದಿಸಿದ್ದಾರೆ.

ಭಾರತ ಮಾದಕ ದ್ರವ್ಯ ನಿಯಂತ್ರಣಕ್ಕೆ ಕಠಿಣ ಕ್ರಮ ಜರುಗಿಸಲಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ದೇಶವನ್ನು ಮಾದಕ ದ್ರವ್ಯದಿಂದ ಮುಕ್ತಗೊಳಿಸಲು ಎನ್‌ಸಿಬಿ ದಿಟ್ಟ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಸಚಿವ ಅಮಿತ್ ಶಾ ಹೇಳಿದರು.

Source: NEWS ON AIR
Translated by : Santhosh
Edited by : Santhosh
Typed by : Pooja

# 03.05.2025 ರಾಷ್ಟ್ರೀಯ ವಾರ್ತೆಗಳು 19.35 ಬುಲೆಟ್ ರೈಲು

ಭಾರತದ ಮೊದಲ ಹೈಸ್ಪೀಡ್ ರೈಲು ಕಾರಿಡಾರ್ ಪ್ರಗತಿಯನ್ನು ಪರಿಶೀಲಿಸಲು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದು ಮುಂಬೈನ ಬಾಂದ್ರಾ– ಕುರ್ಲಾ ಕಾಂಪ್ಲೆಕ್ಸ್ ನಲ್ಲಿರುವ ಬುಲೆಟ್ ರೈಲು ಯೋಜನಾ ಸ್ಥಳಕ್ಕೆ ಭೇಟಿ ನೀಡಿದರು.

ಈ ವೇಳೆ ಪ್ರಮುಖ ನಿರ್ಮಾಣ ವಲಯಗಳನ್ನು ಪರಿಶೀಲಿಸಿದ ಸಚಿವರು, ಎಂಜಿನಿಯರ್‌ಗಳು ಮತ್ತು ಅಧಿಕಾರಿಗಳೊಂದಿಗೆ ಚರ್ಚಿಸಿದರು.

ನಂತರ ಸುದ್ದಿಗಾರರೊಂದಿಗೆ ಮಾತಾನಾಡಿದ ಸಚಿವ ಅಶ್ವಿನಿ ವೈಷ್ಣವ್, ಮಹತ್ವಾಕಾಂಕ್ಷೆಯ ಮುಂಬೈ–ಅಹಮದಬಾದ್ ಬುಲೆಟ್ ರೈಲು ಯೋಜನೆಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ. ದೇಶದ ಮೂಲಸೌಕರ್ಯವನ್ನು ಪರಿವರ್ತಿಸುವಲ್ಲಿ ಮತ್ತು ಆರ್ಥಿಕ ಸಂಪರ್ಕವನ್ನು ಹೆಚ್ಚಿಸುವಲ್ಲಿ ಈ ಯೋಜನೆಯು ಮಹತ್ವವಾಗಿದೆ ಎಂದು ಹೇಳಿದ್ದಾರೆ.

Source: NEWS ON AIR
Translated by : Santhosh
Edited by : Santhosh
Typed by : Pooja

# 03.05.2025 ರಾಷ್ಟ್ರೀಯ ವಾರ್ತೆಗಳು 19.35 ಪಾಕ್ ರಫ್ತು ನಿಷೇಧ

ಪಾಕಿಸ್ತಾನದಿಂದ ನೇರ ಅಥವಾ ಪರೋಕ್ಷ ಆಮದನ್ನು ತಕ್ಷಣದಿಂದ ಜಾರಿಗೆ ಬರುವಂತೆ ಭಾರತ ನಿಷೇಧಿಸಿದೆ.

ಪಾಕಿಸ್ತಾನದಲ್ಲಿ ತಯಾರಾಗುವ ಅಥವಾ ಆದೇಶ ರಫ್ತು ಮಾಡುವ ಎಲ್ಲಾ ಸರಕುಗಳ ನೇರ ಅಥವಾ ಪರೋಕ್ಷ ಆಮದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲಾಗುವುದು ಎಂದು ವಿದೇಶಿ ವ್ಯಾಪಾರ ನಿರ್ದೇಶನಾಲಯವು ಅಧಿಸೂಚನೆಯಲ್ಲಿ ತಿಳಿಸಿದೆ.

ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ನೀತಿಯ ಹಿತಾಸಕ್ತಿಯಿಂದ ಈ ನಿರ್ಬಂಧವನ್ನು ವಿಧಿಸಲಾಗಿದೆ. ಈ ನಿಷೇಧಕ್ಕೆ ಯಾವುದೇ ವಿನಾಯಿತಿ ನೀಡಬೇಕಾದರೆ ಸರ್ಕಾರದ ಅನುಮೋದನೆ ಅಗತ್ಯವಿರುತ್ತದೆ ಎಂದು ವಿದೇಶಿ ವ್ಯಾಪಾರ ನಿರ್ದೇಶನಾಲಯ ತಿಳಿಸಿದೆ.

Source: NEWS ON AIR
Translated by : Santhosh
Edited by : Santhosh
Typed by : Pooja

**03.05.2025 ರಾಷ್ಟ್ರೀಯ ವಾರ್ತೆಗಳು 19.35 ಪಾಕ್ ಅಂಚೆ**

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತವು ಪಾಕಿಸ್ತಾನದಿಂದ ಬರುವ ಎಲ್ಲಾ ರೀತಿಯ ಅಂಚೆ ಮತ್ತು ಪಾರ್ಸಲ್‌ಗಳ ವಿನಿಮಯವನ್ನು ಸ್ಥಗಿತಗೊಳಿಸಿದೆ.

ವಾಯುಮಾರ್ಗದ ಮೂಲಕ ಪಾಕಿಸ್ತಾನದಿಂದ ಬರುವ ಎಲ್ಲಾ ಅಂಚೆ ಮತ್ತು ಪಾರ್ಸಲ್‌ಗಳ ವಿನಿಮಯವನ್ನು ಸ್ಥಗಿತಗೊಳಿಸಲು ಕೇಂದ್ರಸರ್ಕಾರ ನಿರ್ಧರಿಸಿದೆ ಎಂದು ಕೇಂದ್ರ ಸಂವಹನ ಸಚಿವಾಲಯ ತಿಳಿಸಿದೆ.

Source: NEWS ON AIR
Translated by : Santhosh
Edited by : Santhosh
Typed by : Pooja

**03.05.2025 ರಾಷ್ಟ್ರೀಯ ವಾರ್ತೆಗಳು 19.35 ಮಾಸ್ಕೋ ವಿಜಯ ದಿನ**

ರಷ್ಯಾದಲ್ಲಿ ಮೇ 9 ರಂದು ನಡೆಯಲಿರುವ ಮಾಸ್ಕೋ ವಿಜಯ ದಿನದ ಪರೇಡ್‌ನಲ್ಲಿ ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಭಾರತವನ್ನು ಪ್ರತಿನಿಧಿಸಲಿದ್ದಾರೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬದಲಿಗೆ ಸಂಜಯ್ ಸೇಠ್ ರಷ್ಯಾಗೆ ಭೇಟಿ ನೀಡಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಸಮಾರಂಭದಲ್ಲಿ ಭಾಗವಹಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ರಷ್ಯಾ ಆಹ್ವಾನ ನೀಡಿದೆ. ಆದರೆ ರಕ್ಷಣಾ ಖಾತೆ ರಾಜ್ಯ ಸಚಿವರು ಪರೇಡ್‌ನಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ ಎಂದು ರಷ್ಯಾ ಪ್ರತಿನಿಧಿಗಳಿಗೆ ಮುಂಚಿತವಾಗಿ ತಿಳಿಸಲಾಗಿದೆ ಎಂದು ಸಚಿವಾಲಯ ತಿಳಿಸಲಾಗಿದೆ.

Source: NEWS ON AIR
Translated by : Santhosh
Edited by : Santhosh
Typed by : Pooja

**03.05.2025 ರಾಷ್ಟ್ರೀಯ ವಾರ್ತೆಗಳು 19.35 ಐಪಿಎಲ್ ಕ್ರಿಕೆಟ್**

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್ – ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೇಂಜರ್ಸ್ ಬೆಂಗಳೂರು ಮತ್ತು ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

Source: NEWS ON AIR
Translated by : Santhosh
Edited by : Santhosh
Typed by : Pooja

## 03.05.2025 ರಾಷ್ಟ್ರೀಯ ವಾರ್ತೆಗಳು 19.35 ಬಾಲ ಪುರಸ್ಕಾರ

ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ – 2025ರ ನಾಮ ನಿರ್ದೇಶನಕ್ಕಾಗಿ ಪೋರ್ಟಲ್ ತೆರೆಯಲಾಗಿದ್ದು, ಜುಲೈ 31ರ ವರೆಗೆ ಕಾಲಾವಕಾಶ ನೀಡಲಾಗಿದೆ. 5 ರಿಂದ 18 ವರ್ಷದೊಳಗಿನ ಮಕ್ಕಳ ಅಪ್ರತಿಮ ಸಾಧನೆಗೆ ಈ ಪುರಸ್ಕಾರವನ್ನು ರಾಷ್ಟ್ರಪತಿಗಳು ನೀಡುತ್ತಾರೆ.

ಸಮಾಜಸೇವೆ, ಸಾಹಸ, ಪರಿಸರ, ಕ್ರೀಡೆ, ಕಲೆ ಹಾಗೂ ಸಂಸ್ಕೃತಿ ವಿಭಾಗಗಳಲ್ಲಿ ಸಾಧನೆ ಮಾಡಿರುವ ಮಕ್ಕಳಿಗೆ ಈ ಪ್ರಶಸ್ತಿ ವಿತರಿಸಲಾಗುವುದು. ಎಲ್ಲಾ ನಾಮ ನಿರ್ದೇಶನಗಳು ಆನ್‌ಲೈನ್ ಮೂಲಕವೇ ಮಾಡಬಹುದಾಗಿದ್ದು, ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ. ಆಸಕ್ತರು awards.gov.in ಮೂಲಕ ಅರ್ಜಿ ಸಲ್ಲಿಸಬಹುದು.

Source: NEWS ON AIR
Translated by : Santhosh
Edited by : Santhosh
Typed by : Pooja

**03.05.2025 ರಾಷ್ಟ್ರೀಯ ವಾರ್ತೆಗಳು 19.35 ಪತ್ರಿಕಾ ಸ್ವಾತಂತ್ರ್ಯ ದಿನ**

ಇಂದು ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವನ್ನು ಆಚರಿಸಲಾಗುತ್ತಿದೆ. ಪತ್ರಿಕಾ ಸ್ವಾತಂತ್ರ್ಯದ ಪರವಾಗಿ ಉಪಕ್ರಮಗಳನ್ನು ಪ್ರೋತ್ಸಾಹಿಸಲು ಮತ್ತು ಅಭಿವೃದ್ಧಿಪಡಿಸಲು ಹಾಗೂ ವಿಶ್ವಾದ್ಯಂತ ಪತ್ರಿಕಾ ಸ್ವಾತಂತ್ರ್ಯದ ಸ್ಥಿತಿಯನ್ನು ನಿರ್ಣಯಿಸಲು ಈ ದಿನ ಒಂದು ಸಂದರ್ಭವಾಗಿದೆ.

ಈ ವರ್ಷದ ವಿಷಯ "ಧೈರ್ಯಶಾಲಿ ಹೊಸ ಜಗತ್ತಿನಲ್ಲಿ ವರದಿ ಮಾಡುವುದು – ಪತ್ರಿಕಾ ಸ್ವಾತಂತ್ರ್ಯ ಮತ್ತು ಮಾಧ್ಯಮದ ಮೇಲೆ ಕೃತಕ ಬುದ್ಧಿಮತ್ತೆಯ ಪರಿಣಾಮ" ಎಂಬುದಾಗಿದೆ. ಬದಲಾಗುತ್ತಿರುವ ಪತ್ರಿಕೋದ್ಯಮ, ಮಾಧ್ಯಮ ಮತ್ತು ಪತ್ರಿಕಾ ಸ್ವಾತಂತ್ರ್ಯದಲ್ಲಿ ಕೃತಕ ಬುದ್ಧಿಮತ್ತೆಯ ತ್ವರಿತ ಬೆಳವಣಿಗೆ ಹಾಗೂ ಬಳಕೆಯನ್ನು ಈ ವಿಷಯ ಒತ್ತಿ ಹೇಳುತ್ತದೆ.

ಇದಲ್ಲದೆ, ಮಾಹಿತಿ ಸಂಗ್ರಹಣೆ, ಸಂಸ್ಕರಣೆ ಮತ್ತು ಪ್ರಸಾರದ ಮೇಲೆ ಎಐ ಪ್ರಭಾವ ಆಳವಾಗಿದ್ದು, ನವೀನ ಅವಕಾಶಗಳು ಮತ್ತು ಗಂಭೀರ ಸವಾಲುಗಳನ್ನು ಪ್ರಸ್ತುತಪಡಿಸುತ್ತದೆ.

1991 ರಲ್ಲಿ ಯುನೆಸ್ಕೋದ ಸಾಮಾನ್ಯ ಸಮ್ಮೇಳನದ 26 ನೇ ಅಧಿವೇಶನದ ಶಿಫಾರಸಿನ ನಂತರ, 1993 ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು, ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವನ್ನು ಘೋಷಿಸಿತು.

Source: NEWS ON AIR
Translated by : Santhosh
Edited by : Santhosh
Typed by : Pooja